**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 46 ಸೇಇಬಿ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 11.2.2010.

**ಅಧಿಸೂಚನೆ**

ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ (7) ರ ಉಪ ನಿಯಮ (1) ರ ಪರಂತುಕದನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ತಹಸೀಲ್ದಾರ್ ಗ್ರೇಡ್-II ಸಮೂಹ `ಬಿ` ಹುದ್ದೆಗಳನ್ನು ಹೊರತುಪಡಿಸಿ ಎಲ್ಲಾ ಇಲಾಖೆ/ಸೇವೆಗಳಲ್ಲಿರುವ ಸಮೂಹ `ಬಿ` ಹುದ್ದೆಗಳ ಮೊದಲ ನೇಮಕಾತಿಗಳಿಗೆ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ನೇಮಕಾತಿ ಪ್ರಾಧಿಕಾರವೆಂದು ನಿರ್ದಿಷ್ಟಪಡಿಸಲಾಗಿದೆ.

ಪರಂತು, ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರನ್ನು ಸಮೂಹ `ಬಿ` ಹುದ್ದೆಗಳಿಗೆ ನೇಮಕಾತಿ ಪ್ರಾಧಿಕಾರವೆಂದು ಈಗಾಗಲೇ ಅಧಿಸೂಚಿಸಿರುವುದನ್ನು ಹೊರತುಪಡಿಸಿ ಕರ್ನಾಟಕ ನಾಗರಿಕ ಸೇವೆಗಳು ಸಮೂಹ-ಬಿ ಹುದ್ದೆಗಳಿಗೆ ಸರ್ಕಾರದಿಂದ ನೇಮಕಗೊಂಡವರಿಗೆ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957, ನಿಯಮ 8 ರ ಕ್ಲಾಸ್ (v) ರಿಂದ (viii) ರಲ್ಲಿ ನಿರ್ದಿಷ್ಟಪಡಿಸಿದ ದಂಡನೆಯನ್ನು ವಿಧಿಸಲು ಸರ್ಕಾರವು ಶಿಸ್ತು ಪ್ರಾಧಿಕಾರವಾಗಿ ಮುಂದುವರಿಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ. ಮಾರ್ಕಂಡೇಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಅದ್ದರ 200 ಪ್ರತಿಗಳನ್ನು ಸರಬರಾಜು ಮಾಡಲು.

..2.

ಪ್ರತಿ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿ.
3) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು.
4) ರಾಜ್ಯಪಾಲರ ಕಾರ್ಯದರ್ಶಿ.
5) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6) ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
7) *ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನ ಮಂಡಲ.
8) *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು.
9) *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10) *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11) *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬಿಡಿಎ ಸಂಕೀರ್ಣ, ಇಂದಿರಾನಗರ, ಬೆಂಗಳೂರು.
12) *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13) ಎಲ್ಲಾ ಇಲಾಖಾ ಮುಖ್ಯಸ್ಥರು.
14) ಎಲ್ಲಾ ಪ್ರಾದೇಶಿಕ ಆಯುಕ್ತರು.
15) ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
16) ಸರ್ಕಾರದ ಎಲ್ಲಾ ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು.
17) ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳ ಶಾಖಾಧಿಕಾರಿಗಳು.
18) ಶಾಖಾ ರಕ್ಷಾ ಕಡತ/ವಾರದ ಗೆಜೆಟ್/ಬಿಡಿ ಪ್ರತಿ.

**(* ಮುಖಪತ್ರದೊಂದಿಗೆ)**

*ವಿ.ಸೂ:* ಈ ಅಧಿಸೂಚನೆಯು http://www.karnataka.gov.in/svahini ವೆಬ್‌ಸೈಟ್‌ನಲ್ಲಿ ಲಭ್ಯವಿದೆ.

ಈ ಅಧಿಸೂಚನೆಯು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 46 ಎಸ್‌ಡಿಇ 2008 ದಿನಾಂಕ 11.2.2010 ರ ಕನ್ನಡಾನುವಾದವಾಗಿದೆ.